**All India Radio: Bangalore**
**Regional Bulletin In Kannada**
**20.06.2025 / 2.30 p.m.**
**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**<><><><>**

ಮುಖ್ಯಾಂಶಗಳು

೧. ಬೆಂಗಳೂರಿನಲ್ಲಿ ಬಿಜಿಎಸ್ ಮೆಡಿಕಲ್ ಕಾಲೇಜು ಆಸ್ಪತ್ರೆ ಕಟ್ಟಡ ಲೋಕಾರ್ಪಣೆಗೊಳಿಸಿದ ಕೇಂದ್ರ ಗೃಹ ಸಚಿವ ಅಮಿತ್ ಶಾ

೨. ವಸತಿ ಇಲಾಖೆಯಲ್ಲಿ ಭ್ರಷ್ಟಾಚಾರ ಆರೋಪ - ಸಚಿವ ಜಮೀರ್ ಅಹ್ಮದ್ ರಾಜೀನಾಮೆಗೆ ಬಿಜೆಪಿ ಆಗ್ರಹ

೩. ಆರ್ಎಸ್ಎಸ್ ಮುಖಂಡರ ಮನೆ ಮೇಲೆ ದಾಳಿ ಪ್ರಕರಣ -ದಕ್ಷಿಣ ಕನ್ನಡ ಪೊಲಿಸ್ ವರಿಷ್ಠಾಧಿಕಾರಿಗೆ ಹೈಕೋರ್ಟ್ ನೋಟೀಸ್

೪. ನಾಳೆ ಅಂತಾರಾಷ್ಟ್ರೀಯ ಯೋಗದಿನಾಚರಣೆ - ರಾಜ್ಯದಲ್ಲೂ ಅಗತ್ಯ ಸಿದ್ಧತೆ

**<><><><>**

ಪ್ರಧಾನಿ ನರೇಂದ್ರ ಮೋದಿ ದೇಶದ ೬೦ ಕೋಟಿಗೂ ಹೆಚ್ಚು ಜನರಿಗೆ ೫ ಲಕ್ಷ ರೂಪಾಯಿ ವೆಚ್ಚದಲ್ಲಿ ಆರೋಗ್ಯ ಸೇವೆ ಒದಗಿಸುತ್ತಿರುವುದು ಐತಿಹಾಸಿಕ ನಿರ್ಣಯವಾಗಿದೆ ಎಂದು ಕೇಂದ್ರ ಗೃಹ ಸಚಿವ ಅಮಿತ್ ಶಾ ತಿಳಿಸಿದ್ದಾರೆ. ಬೆಂಗಳೂರಿನಲ್ಲಿ ಆದಿಚುಂಚನಗಿರಿ ವಿಶ್ವವಿದ್ಯಾಲಯದ ಮೆಡಿಕಲ್ ಕಾಲೇಜು ಹಾಗೂ ಅಸ್ಪತ್ರೆ ಕಟ್ಟಡವನ್ನು ಲೋಕಾರ್ಪಣೆಗೊಳಿಸಿ ಮಾತನಾಡಿದ ಅವರು, ಸರ್ವರಿಗೂ ಶಿಕ್ಷಣ ಒದಗಿಸುತ್ತಿರುವ ಆದಿಚುಂಚನಗಿರಿಯ ಮಠದ ಸೇವೆಯನ್ನು ಶ್ಲಾಘಿಸಿದ್ದಾರೆ.

ಪ್ರಧಾನ ಮಂತ್ರಿ ಜನೌಷಧ ಯೋಜನೆ, ಯೋಗ ಸೇರಿದಂತೆ ಹಲವು ಯೋಜನೆಗಳ ಮೂಲಕ ಆರೋಗ್ಯಯುತ ಸಮಾಜ ನಿರ್ಮಾಣ ಮಾಡುವುದು ಕೇಂದ್ರ ಸರ್ಕಾರದ ಗುರಿ ಎಂದು ತಿಳಿಸಿದ್ದಾರೆ. ಆರೋಗ್ಯದ ದೃಷಿಯಿಂದ ೫೧ ಸಾವಿರವಿದ್ದ ಮೆಡಿಕಲ್ ಕಾಲೇಜು ಸೀಟ್‌ಗಳನ್ನು ೧ ಲಕ್ಷದ ೧೮ ಸಾವಿರಕ್ಕೆ ಏರಿಕೆ ಮಾಡಲಾಗಿದೆ ಎಂದು ಸಮರ್ಥಿಸಿಕೊಂಡಿದ್ದಾರೆ.

ಧ್ವನಿ - ಅಮಿತ್ ಶಾ

ಕಾರ್ಯಕ್ರಮದಲ್ಲಿ ಕೇಂದ್ರ ಸಚಿವ ಹೆಚ್. ಡಿ. ಕುಮಾರಸ್ವಾಮಿ ಮಾತನಾಡಿ ಬಲಿಷ್ಠ ಭಾರತವನ್ನು ಕಟ್ಟುವ ನಿಟ್ಟಿನಲ್ಲಿ ಪ್ರಧಾನಿ ನರೇಂದ್ರ ಮೋದಿ ಹಾಗೂ ಗೃಹ ಸಚಿವ ಅಮಿತ್ ಶಾ ಅವರ

ಮಾರ್ಗದರ್ಶನದಲ್ಲಿ ಕರ್ನಾಟಕದ ಸಮಸ್ಯೆಗಳನ್ನು ಹಂತ ಹಂತವಾಗಿ ಪರಿಹರಿಸಲು ಪ್ರಯತ್ನಿಸುವುದಾಗಿ ಭರವಸೆ ನೀಡಿದ್ದಾರೆ. ವೈದ್ಯಕೀಯ ಶಿಕ್ಷಣ ಮತ್ತು ಕೌಶಲ್ಯಾಭಿವೃದ್ಧಿ ಸಚಿವ ಶರಣ ಪ್ರಕಾಶ್ ಪಾಟೀಲ್ ಮಾತನಾಡಿ ರಾಜ್ಯದಲ್ಲಿ ವೈದ್ಯಕೀಯ ಶಿಕ್ಷಣದ ಬೆಳವಣಿಗೆಯಲ್ಲಿ ಖಾಸಗಿ ಸಹಭಾಗಿತ್ವದ ಅಗತ್ಯವಿದೆ. ರಾಜ್ಯದಲ್ಲಿ ೨೪ ಸರ್ಕಾರಿ ವೈದ್ಯಕೀಯ ಕಾಲೇಜುಗಳಿದ್ದರೆ ೭೦ ಖಾಸಗಿ ವೈದ್ಯಕೀಯ ಕಾಲೇಜುಗಳಿವೆ ಎಂದು ತಿಳಿಸಿದರು.

ಆದಿಚುಂಚನಗಿರಿ ವಿಶ್ವವಿದ್ಯಾಲಯದ ಕುಲಪತಿ ಡಾ. ನಿರ್ಮಲಾನಂದ ಸ್ವಾಮೀಜಿ ಕಾರ್ಯಕ್ರಮದ ಸಾನಿಧ್ಯ ವಹಿಸಿದ್ದರು.

<><><>

ವಸತಿ ಇಲಾಖೆಯಲ್ಲಿ ಭ್ರಷ್ಟಾಚಾರ ನಡೆದಿದೆ ಎಂದು ಆರೋಪಿಸಿರುವ ಕಾಂಗ್ರೆಸ್ ಶಾಸಕ ಬಿ ಅರ್ ಪಾಟೀಲ್ ಆಡಿಯೊ ಬಹಿರಂಗವಾಗಿದೆ. ಈ ಧ್ವನಿ ಶಾಸಕ ಬಿ ಆರ್ ಪಾಟೀಲ್ ವಸತಿ ಸಚಿವ ಜಮೀರ್ ಅಹ್ಮದ್ ಅವರ ಆಪ್ತ ಕಾರ್ಯದರ್ಶಿ ಸರ್ಫರಾಜ್ ಖಾನ್ ಅವರೊಂದಿಗೆ ಮಾತನಾಡುತ್ತಿರುವ ಸಂಭಾಷಣೆಯಾಗಿದೆ ಎಂದು ಐಎನ್‌ಎಸ್ ಸುದ್ದಿಸಂಸ್ಥೆ ವರದಿ ಮಾಡಿದೆ. ಲಂಚ ನೀಡಿದವರಿಗೆ ಮಾತ್ರ ಮನೆಗಳನ್ನು ಹಂಚಿಕೆ ಮಾಡಲಾಗುತ್ತಿದೆ ಎಂದು ಶಾಸಕ ಪಾಟೀಲ್ ಆರೋಪಿಸಿರುವುದು ಬಹಿರಂಗವಾಗಿದೆ.

ಶಾಸಕರ ಈ ಆರೋಪದ ಬಗ್ಗೆ ನ್ಯಾಯಾಂಗ ತನಿಖೆಗೆ ಬಿಜೆಪಿ ಆಗ್ರಹಿಸಿದೆ.

ವಸತಿ ಸಚಿವ ಜಮೀರ್ ಅಹ್ಮದ್ ಅವರ ರಾಜೀನಾಮೆ ಪಡೆಯುವಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಒತ್ತಾಯಿಸಿದೆ. ಸಾಮಾಜಿಕ ಜಾಲತಾಣದಲ್ಲಿ ಪೋಸ್ಟ್ ಮಾಡಿರುವ ಪ್ರತಿಪಕ್ಷ ನಾಯಕ ಆರ್ ಆಶೋಕ, ಧ್ವನಿ ಆಧಾರದ ಮೇಲೆ ಹೈಕೋರ್ಟ್ ನ್ಯಾಯಾಮೂರ್ತಿ ನೇತೃತ್ವದಲ್ಲಿ ನ್ಯಾಯಾಂಗ ತನಿಖೆಗೆ ಆದೇಶ ನೀಡುವಂತೆ ಆಗ್ರಹಿಸಿದ್ದಾರೆ.

<><><>

ಯಾವುದೇ ಕಾರಣವಿಲ್ಲದೆ ಮಧ್ಯರಾತ್ರಿ ವೇಳೆ ಆರ್‌ಎಸ್‌ಎಸ್ ಕಾರ್ಯಕರ್ತರ ನಿವಾಸಗಳ ಮೇಲೆ ದಾಳಿ ನಡೆಸಿದ ಪ್ರಕರಣಕ್ಕೆ ಸಂಬಂಧಿಸಿದಂತೆ ದಕ್ಷಿಣ ಕನ್ನಡ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗೆ ಉಚ್ಚ ನ್ಯಾಯಾಲಯ ನೊಟೀಸ್ ನೀಡಿದೆ. ಪ್ರಕರಣ ಸಂಬಂಧ ಸೂಕ್ತ ದಾಖಲೆ ಸಲ್ಲಿಸುವಂತೆ ಸೂಚಿಸಿದೆ. ಕಾನೂನು ಹೊರತಾಗಿ ಆರ್‌ಎಸ್‌ಎಸ್ ಮುಖಂಡರ ವಿರುದ್ಧ ಯಾವುದೇ ಕ್ರಮ ಕೈಗೊಳ್ಳದಂತೆ ನಿರ್ದೇಶನ ನೀಡಿದೆ.

ವ್ಯಕ್ತಿ ಸ್ವಾತಂತ್ರ್ಯದ ಮೂಲಭೂತ ಹಕ್ಕನ್ನು ಪೊಲೀಸರು ಕಸಿದಿದ್ದಾರೆ ಎಂದು ಆರೋಪಿಸಿ ಯು.ಜಿ. ರಾಧಾ ಎಂಬುವವರು ಹೈಕೋರ್ಟ್ ಮೊರೆ ಹೋಗಿದ್ದರು. ೨೦ ಲಕ್ಷ ರೂಪಾಯಿ ಮಾನನಷ್ಟ ಪರಿಹಾರ ನೀಡುವಂತೆ ನಿರ್ದೇಶಿಸಬೇಕು ಎಂದು ಮನವಿ ಮಾಡಿದ್ದರು.

ಅರ್ಜಿಯ ವಿಚಾರಣೆ ನಡೆಸಿದ ನ್ಯಾಯಮೂರ್ತಿ ಸುನಿಲ್ ದತ್ ಯಾದವ್ ಅವರ ಏಕಸದಸ್ಯ ಪೀಠ, ದಕ್ಷಿಣ ಕನ್ನಡ ಪೊಲೀಸ್ ವರಿಷ್ಠಾಧಿಕಾರಿಗೆ ಜಿಲ್ಲಾ ನೋಟಿಸ್ ನೀಡಿದೆ.

ಕಾನೂನು ಉಲ್ಲಂಘಿಸುವ ಯಾವುದೇ ಕ್ರಮ ಕೈಗೊಳ್ಳದಂತೆ ನ್ಯಾಯಾಲಯ ಪೊಲೀಸ್ ಇಲಾಖೆಗೆ ಎಚ್ಚರಿಕೆ ನೀಡಿದೆ.

<><><><>

ಪರಿಸರ ಸ್ನೇಹಿ  ನವೀಕರಿಸಬಹುದಾದ ಮತ್ತು ಜೈವಿಕ ಇಂಧನ ಬಳಕೆಗೆ ಹೆಚ್ಚಿನ ಒತ್ತು ನೀಡುವ ಅಗತ್ಯವಿದ್ದು, ಈ ಮೂಲಕ ಪರಿಸರ ಸಂರಕ್ಷಣೆಗೆ ಮುಂದಾಗಬೇಕಿದೆ ಎಂದು ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ ಬಿ ಖಂಡ್ರೆ ತಿಳಿಸಿದ್ದಾರೆ.

ಬೆಂಗಳೂರು ಗ್ರಾಮಾಂತರ ಜಿಲ್ಲೆಯ ನೆಲಮಂಗಲ ಬಳಿಯ ಕ್ಷೇಮವನದಲ್ಲಿ ವಿಶ್ವ ಪರಿಸರ ದಿನಾಚರಣೆ ಅಂಗವಾಗಿ ಜೈವಿಕ ಇಂಧನ ಅಭಿವೃದ್ಧಿ ಮಂಡಳಿ ಸಹಯೋಗದಲ್ಲಿ ನಡೆದ ಕಾರ್ಯಕ್ರಮದಲ್ಲಿ  ಮಾತನಾಡಿದ ಅವರು, ಪ್ರಕೃತಿ ನಮಗೆ ನೀಡಿರುವ ನೈಸರ್ಗಿಕ ಸಂಪನ್ಮೂಲವನ್ನು ವಿವೇಚನಾತ್ಮಕವಾಗಿ ಮತ್ತು ಹಿತಮಿತವಾಗಿ ಬಳಸಿದರೆ ಮಾತ್ರ ಮನುಷ್ಯ ಉಳಿಯಲು ಸಾಧ್ಯ ಎಂದು ಅಭಿಪ್ರಾಯಪಟ್ಟಿದ್ದಾರೆ.

<><><><>

೧೧ ನೇ ಅಂತರರಾಷ್ಟ್ರೀಯ ಯೋಗ ದಿನವನ್ನು ನಾಳೆ ವಿಶ್ವಾದ್ಯಂತ ಆಚರಿಸಲಾಗುತ್ತಿದೆ. ೧೦೦ ಪ್ರವಾಸಿ ಆಧಾರಿತ ಐತಿಹಾಸಿಕ ತಾಣಗಳು ಮತ್ತು ದೇಶಾದ್ಯಂತ ೫೦ ಕ್ಕೂ ಹೆಚ್ಚು ಸಾಂಸ್ಕೃತಿಕ ತಾಣಗಳಲ್ಲಿ ಯೋಗ ಆಧಿವೇಶನಗಳನ್ನು ಆಯೋಜಿಸಲಾಗಿದೆ.

ಪ್ರಧಾನಿ ನರೇಂದ್ರ ಮೋದಿ ನಾಳೆ ಆಂಧ್ರಪ್ರದೇಶದಲ್ಲಿ ನಡೆಯಲಿರುವ ಯೋಗ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ. ಬಂದರು ನಗರಿ ವಿಶಾಖಪಟ್ಟಣದ ಆರ್‌ಕೆ ಬೀಚ್‌ನಿಂದ ಭೋಗಪುರಂ ವರೆಗೆ ೨೬ ಕಿ.ಮೀ. ಉದ್ದದ ಕಾರಿಡಾರ್‌ನಲ್ಲಿ ೧೧ನೇ ಅಂತರರಾಷ್ಟ್ರೀಯ ಯೋಗ ದಿನಾಚರಣೆ ನಡೆಯಲಿದೆ.

ರಾಜ್ಯದಲ್ಲೂ ಯೋಗ ದಿನಾಚರಣೆ ಸಕಲ ಸಿದ್ಧತೆ ಮಾಡಿಕೊಳ್ಳಲಾಗಿದೆ.

ಬೆಂಗಳೂರಿನಲ್ಲಿ ವಿಧಾನಸೌಧದ ಆವರಣದಲ್ಲಿ ಮುಂಜಾನೆ ೬ ಗಂಟೆಯಿಂದ ೮ರ ವರೆಗೆ ಯೋಗಾಭ್ಯಾಸ ಕಾರ್ಯಕ್ರಮ ನಡೆಯಲಿದೆ.

ರಾಮನಗರ ಜಿಲ್ಲಾಡಳಿತ ಆಯೋಜಿಸಿರುವ ಕಾರ್ಯಕ್ರಮವನ್ನು ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಉದ್ಘಾಟಿಸಲಿದ್ದಾರೆ.

ವಿಜಯಪುರದಲ್ಲಿ ಜಿಲ್ಲಾಧಿಕಾರಿ ಟಿ ಭೂಬಾಲನ್ ಮಾತನಾಡಿ, ಯೋಗಸಂಗಮ, ಹಸಿರು ಯೋಗ, ಯೋಗ ನಡಿಗೆ, ಹರಿತ್ ಯೋಗ, ಮೂಲಕ ಕಾರ್ಯಕ್ರಮ ಆಯೋಜಿಸಲಾಗಿದೆ ಎಂದು ತಿಳಿಸಿದ್ದಾರೆ.

ಧ್ವನಿ - ಜಿಲ್ಲಾಧಿಕಾರಿ ಟಿ. ಭೂಬಾಲಾನ್

೧೧ನೆಯ ಅಂತರಾಷ್ಟ್ರೀಯ ಯೋಗ ದಿನಾಚರಣೆ ನಿಮಿತ್ತ ಆಯುಷ್ ಇಲಾಖೆಯ ಸಹಯೋಗದಲ್ಲಿ ಜಿಲ್ಲಾ ಆಡಳಿತದ ವಿವಿಧ ಇಲಾಖೆಗಳು, ವಿವಿಧ ಸಂಘ - ಸಂಸ್ಥೆ ಹಾಗೂ ಆಸ್ಪತ್ರೆಗಳ ಸಹಯೋಗದಲ್ಲಿ ಯೋಗ ಜಾಗೃತಿಯ ಯೋಗ ನಡಿಗೆಯನ್ನು ಬೆಳಗಾವಿಯಲ್ಲಿಂದು ನಡೆಸಲಾಯಿತು.

ಆಯುಷ್ ಇಲಾಖೆಯ ಅಧಿಕಾರಿ ಶ್ರೀಕಾಂತ ಸುಣದೋಳಿ ಯೋಗ ನಡುಗೆಗೆ ಚಾಲನೆ ನೀಡಿದರು.

<><><><>

ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಮಹೇಶ್ ಜೋಶಿ ಪಕ್ಷದ ರಾಜಕಾರಣವನ್ನು ಸಾಹಿತ್ಯಕ್ಕೆ ತಂದಿದ್ದಾರೆ. ಪರಿಷತ್ತನ್ನು ಕೇಂದ್ರೀಕರಿಸಿಕೊಂಡು ಬೈಲಾ ತಿದ್ದುಪಡಿ ಮಾಡಲಾಗುತ್ತಿದೆ ಎಂದು ಬೆಂಗಳೂರಿನ ಕನ್ನಡ ನಾಡು, ನುಡಿ ಜಾಗೃತಿ ಸಮಿತಿ ಬಳ್ಳಾರಿಯಲ್ಲಿ ಆರೋಪಿಸಿದೆ.

ಈ ಬಗ್ಗೆ ತನಿಖೆ ಆಗುವವರೆಗೆ ಪರಿಷತ್ತಿಗೆ ಆಡಳಿತಾಧಿಕಾರಿಯನ್ನು ನೇಮಕ ಮಾಡಬೇಕೆಂದು ಸಮಿತಿ ಆಗ್ರಹಿಸಿದೆ. ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನ ರಾಜಕೀಯ ಪಕ್ಷಗಳ ವೇದಿಕೆಯಾಗಬಾರದು. ಅದ್ದೂರಿ ಹಾಗೂ ಅಬ್ಬರದ ಜಾತ್ರೆಯಾಗಿ ಅಪವ್ಯಯವಾಗಬಾರದು ಎಂದು ತಿಳಿಸಿದೆ.

<><><><>

ಕೋಲಾರ ಜಿಲ್ಲಾ ಪೊಲೀಸ್ ವತಿಯಿಂದ ಪೊಲೀಸ್ ಇಲಾಖೆಗೆ ಸಂಬಂಧಿಸಿದಂತೆ ಜಾಗೃತಿ ವೀಡಿಯೋಗಳ ಸ್ಪರ್ಧೆಯನ್ನು ಹಮ್ಮಿಕೊಳ್ಳಲಾಗಿದೆ ಎಂದು ಪೊಲೀಸ್ ವರಿಷ್ಠಾಧಿಕಾರಿ ನಿಖಿಲ್ .ಬಿ ತಿಳಿಸಿದ್ದಾರೆ.

ಸೈಬರ್ ಕ್ರೈಂ ಜಾಗೃತಿ, ಮಾದಕ ವ್ಯಸನದಿಂದಾಗುವ ದುಷ್ಪರಿಣಾಮಗಳು, ಮಾದಕ ವಸ್ತುಗಳ ಅಕ್ರಮ ಸಾಗಟ ಹಾಗೂ ಮಾರಾಟ, ಸಂಚಾರ ನಿಯಮಗಳ ಪಾಲನೆ, ೧೧೨ ಸಹಾಯವಾಣಿಯ, ಪೊಲೀಸ್ ಠಾಣೆಗಳಲ್ಲಿ ಸಾರ್ವಜನಿಕರಿಗೆ ಇರುವ ಸೌಲಭ್ಯಗಳು ಹಾಗೂ ಠಾಣೆಗಳಲ್ಲಿ ದೂರು ಸಲ್ಲಿಸುವ ಹಾಗೂ ಜಾಗೃತಿ ಮೂಡಿಸುವುದು ಸ್ಪರ್ಧಾ ವಿಷಯಗಳಾಗಿವೆ.

<><><><>

ಸಂಕ್ಷಿಪ್ತ ಸುದ್ದಿ

೧. ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಉಡುಪಿ ಜಿಲ್ಲೆ ವತಿಯಿಂದ ರಾಷ್ಟೀಯ ಆರೋಗ್ಯ ಅಭಿಯಾನ ಯೋಜನೆಯಡಿಯಲ್ಲಿ ಅನುಮೋದನೆಗೊಂಡ ಹೊಸ ಲಸಿಕಾ ಉಗ್ರಣ ಕಟ್ಟಡ ನಿರ್ಮಾಣ ಕಾಮಗಾರಿಯ ಶಿಲಾನ್ಯಾಸವನ್ನು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವೆ ಲಕ್ಷ್ಮಿ ಆರ್ ಹೆಬ್ಬಾಳಕರ್ ನೆರವೇರಿಸಿದರು.

<><><><>

<><><><>